# All India Radio: Bangalore
# National Bulletin In Kannada
# 15.04.2026 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ವಿಕಸಿತ ಭಾರತ ಗುರಿ ಸಾಧನೆಗೆ ೯ ಪ್ರಮುಖ ಕ್ಷೇತ್ರಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಜನ ಸಾಮಾನ್ಯರ ಸಬಲೀಕರಣವೇ ಆಡಳಿತದ ನಿಜವಾದ ಉದ್ದೇಶ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
3. ಭಾರತ-ಫ್ರಾನ್ಸ್ ಸಂಸದೀಯ ಸೌಹಾರ್ದ ಗುಂಪಿನ ನಿಯೋಗದೊಂದಿಗೆ ಲೋಕಸಭೆ ಸಭಾಧ್ಯಕ್ಷ ಓಂ ಬಿರ್ಲಾ ಸಮಾಲೋಚನೆ
4. ಕಳೆದ ಆರ್ಥಿಕ ವರ್ಷದಲ್ಲಿ ಭಾರತದ ಒಟ್ಟು ರಫ್ತು ಶೇಕಡ ೪.೨೨ರಷ್ಟು ಬೆಳವಣಿಗೆ ; ರಫ್ತು ಮೌಲ್ಯ ೮೬೦ ಶತಕೋಟಿ ಡಾಲರ್‌ಗೆ ಏರಿಕೆ
5. ಐಪಿಎಲ್ ಟಿ-೨೦ ಕ್ರಿಕೆಟ್ ; ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

<><><><>

ವಿಕಸಿತ ಭಾರತದ ಗುರಿ ಸಾಧಿಸಲು ನಾಗರಿಕರು ೯ ಪ್ರಮುಖ ಕ್ಷೇತ್ರಗಳಲ್ಲಿ ಪ್ರಾಮಾಣಿಕವಾಗಿ ತೊಡಗಿಸಿಕೊಳ್ಳಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಕರ್ನಾಟಕದ ಮಂಡ್ಯ ಜಿಲ್ಲೆಯ ಆದಿ ಚುಂಚನಗಿರಿ ಮಠದಲ್ಲಿ ನೂತನವಾಗಿ ನಿರ್ಮಿಸಲಾದ ಗುರು ಭೈರವೈಕ್ಯ ಮಂದಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಸಂತರು ಮತ್ತು ಮುನಿಗಳು ಇಂತಹ ಉನ್ನತ ಸಮಾಜದ ಕನಸನ್ನು ಕಂಡಿದ್ದರು. ಜಲಸಂರಕ್ಷಣೆ ಮತ್ತು ನಿರ್ವಹಣೆ, ತಾಯಿ ಹೆಸರಿನಲ್ಲಿ ಒಂದು ಗಿಡ ಅಭಿಯಾನದಡಿ ಗಿಡಗಳನ್ನು ನೆಡುವುದು ಹಾಗೂ ತಮ್ಮ ಸುತ್ತಮುತ್ತಲಿನ ಪರಿಸರ, ಧಾರ್ಮಿಕ ಸ್ಥಳಗಳು ಗ್ರಾಮ ಮತ್ತು ನಗರಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಮನವಿ ಮಾಡಿದರು. ಸ್ವದೇಶಿ ವಸ್ತುಗಳು ಮತ್ತು ಉದ್ಯಮಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಸ್ವದೇಶಿ ಚಳುವಳಿಯನ್ನು ಬಲಪಡಿಸಬೇಕು ಹಾಗೂ ಪ್ರವಾಸಿತಾಣಗಳಿಗೆ ಭೇಟಿ ನೀಡುವ ಮೂಲಕ ದೇಶದ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಬೇಕು ಎಂದು ತಿಳಿಸಿದರು. ರಸಾಯನಿಕ ಮುಕ್ತ ಸಾವಯವ ಕೃಷಿ ಒತ್ತು ನೀಡುವಂತೆ ರೈತರಲ್ಲಿ ವಿನಂತಿಸಿದ ಪ್ರಧಾನಿ ಉತ್ತಮ ಆರೋಗ್ಯಕ್ಕಾಗಿ ಸಿರಿಧಾನ್ಯ ಸೇವನೆ, ಯೋಗ, ಕ್ರೀಡೆ ಹಾಗೂ ದೈಹಿಕ ಸಾಮರ್ಥ್ಯವನ್ನು ದೈನಂದಿನ ಜೀವನದ ಭಾಗವಾಗಿಸಿಕೊಳ್ಳಲು ಸಲಹೆ ನೀಡಿದರು. ಇದರ ಜೊತೆಗೆ ಬಡವರು ಮತ್ತು ಹಿಂದುಳಿದ ವರ್ಗಗಳ ಬಗ್ಗೆ ಅನುಕಂಪ ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಲು ಪ್ರಮುಖವಾದದ್ದು ಎಂದು ಪ್ರತಿಪಾದಿಸಿದರು. ಇದಕ್ಕೂ ಮುನ್ನ ಆದಿಚುಂಚನಗಿರಿಯಲ್ಲಿ ಬೃಹತ್ ರೋಡ್ ಶೋ ನಡೆಸಿದ ಪ್ರಧಾನಿ ಕಾಲಭೈರವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪೀಠಾಧ್ಯಕ್ಷರಾಗಿದ್ದ ಡಾ.ಬಾಲಗಂಗಾಧರನಾಥ ಸ್ವಾಮೀಜಿಯವರ ಗದ್ದುಗೆಗೆ ಪುಷ್ಪ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಅವರು ಸೌಂದರ್ಯ ಲಹರಿ ಮತ್ತು ಶಿವಸ್ತೋತ್ರಂ ಎಂಬ ಎರಡು ಕೃತಿಗಳನ್ನು ಲೋಕಾರ್ಪಣೆಗೊಳಿಸಿದರು.

<><><><>

ಜನಸಾಮಾನ್ಯರನ್ನು ಸಬಲೀಕರಣಗೊಳಿಸಿ ಅಭಿವೃದ್ಧಿಯ ಪಥದಲ್ಲಿ ಯಾರು ಹಿಂದುಳಿಯದಂತೆ ನೋಡಿಕೊಳ್ಳುವುದೇ ಆಡಳಿತದ ನಿಜವಾದ ಉದ್ದೇಶ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರತಿಪಾಧಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ ಐಐಪಿಎ ಯ ೭೨ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪಾಲ್ಗೊಂಡು ಉತ್ತಮ ಆಡಳಿತಕ್ಕಾಗಿ ಕೃತಕ ಬುದ್ಧಿಮತ್ತೆ ಎಂಬ ವಿಷಯದ ಕುರಿತು ೫ನೇ ಡಾ.ರಾಜೇಂದ್ರ ಪ್ರಸಾದ್ ಸ್ಮಾರಕ ಉಪನ್ಯಾಸ ನೀಡಿದ ಅವರು, ದೇಶದ ಯಾವುದೇ ಪ್ರದೇಶ ಅಥವಾ ವರ್ಗ ಅಭಿವೃದ್ಧಿಯಿಂದ ವಂಚಿತವಾಗಬಾರದು ಎಂದು ತಿಳಿಸಿದರು. ಒಳಗೊಳ್ಳುವಿಕೆ, ದಕ್ಷತೆ ಮತ್ತು ಭವಿಷ್ಯದ ಸವಾಲುಗಳನ್ನು ಎದುರಿಸಲು ಸನ್ನದ್ಧವಾಗಿರುವ ವಿಕಸಿತ ಭಾರತವನ್ನು ನಿರ್ಮಿಸುವಲ್ಲಿ ಕೃತಕಬುದ್ಧಿಮತ್ತೆಯು ಒಂದು ಪ್ರಬಲ ತಾಂತ್ರಿಕ ಸಾಧನವಾಗಿ ಕೆಲಸ ಮಾಡಲಿದೆ ಎಂದು ತಿಳಿಸಿದರು. ಭಾರತದ ಭಾಷಿಣಿ ವೇದಿಕೆ ಒಳಗೊಳ್ಳುವ ಆಡಳಿತ ಮತ್ತು ಭಾಷಾ ಸಬಲೀಕರಣದ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ. ಇಂಡಿಯಾ ಎಐಮಿಷನ್ ಮತ್ತು ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನದಂತಹ ಉಪಕ್ರಮಗಳು ದೇಶದ ತಾಂತ್ರಿಕ ವ್ಯವಸ್ಥೆಯನ್ನು ಬಲಪಡಿಸುತ್ತದೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು.

<><><>

ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ಅವರಿಂದು ಸಂಸತ್ ಭವನದಲ್ಲಿ ಭಾರತ-ಫ್ರಾನ್ಸ್ ಸಂಸದೀಯ ಸೌಹಾರ್ದ ಗುಂಪಿನ ನಿಯೋಗವನ್ನು ಭೇಟಿ ಮಾಡಿ ಉಭಯ ರಾಷ್ಟ್ರಗಳ ದ್ವಿಪಕ್ಷೀಯ ಸಂಬಂಧಗಳು ಮತ್ತು ಸಂಸದೀಯ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚಿಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಸಭಾಧ್ಯಕ್ಷ ಓಂ ಬಿರ್ಲಾ, ಭಾರತ ಮತ್ತು ಫ್ರಾನ್ಸ್ ನಡುವಿನ ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯ ಶಕ್ತಿ ಮತ್ತು ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳ ಪ್ರಾಮುಖ್ಯತೆ ಈ ಸಭೆಯ ಮುಖ್ಯ ಅಂಶಗಳಾಗಿದ್ದವು ಎಂದು ತಿಳಿಸಿದರು. ಹೊರೈಜನ್-೨೦೪೭ ಮಾರ್ಗಸೂಚಿ ಅಡಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಮತ್ತು ತಾಂತ್ರಿಕ ಪಾಲುದಾರಿಕೆಗಾಗಿ ಇರುವ ಅವಕಾಶಗಳ ಕುರಿತು ಸಮಾಲೋಚನೆ ನಡೆಸಲಾಗಿದೆ.

<><><>

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಅನಿಶ್ಚಿತತೆ ಉಂಟಾಗಿದ್ದರೂ ದೇಶಾದ್ಯಂತ ಅಡಿಗೆ ಅನಿಲದ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಸರ್ಕಾರ ೧೦೦ ಪ್ರತಿಶತ ದೇಶೀಯ ಪೂರೈಕೆಯನ್ನು ಖಚಿತಪಡಿಸಿದೆ. ನವದೆಹಲಿಯಲ್ಲಿಂದು ನಡೆದ ಅಂತರ್ ಸಚಿವಾಲಯದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಕೇಂದ್ರ ಪೆಟ್ರೋಲಿಯಂ ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮ, ದೇಶದಲ್ಲಿ ಎಲ್‌ಪಿಜಿ ಪೂರೈಕೆಯಲ್ಲಿ ಕೊರತೆ ವರದಿಯಾಗಿಲ್ಲ. ಪ್ರಸ್ತುತ ಶೇಕಡ ೯೮ರಷ್ಟು ಎಲ್‌ಪಿಜಿ ಸಿಲಿಂಡರ್‌ಗಳ ಬುಕ್ಕಿಂಗ್ ಆನ್‌ಲೈನ್ ಮೂಲಕ ನಡೆಯುತ್ತಿದ್ದು, ಶೇಕಡ ೯೩ರಷ್ಟು ಹೆಚ್ಚು ವಿತರಣೆಗಳು ಒಟಿಪಿ ಆಧಾರಿತ ದೃಢೀಕರಣ ಮೂಲಕವೇ ನಡೆಯುತ್ತಿದೆ. ಮಾರ್ಚ್ ಮಧ್ಯ ಭಾಗದಿಂದ ಈವರೆಗೆ ಸುಮಾರು ೧ ಲಕ್ಷದ ೩೪ ಸಾವಿರ ಟನ್‌ಗಳಷ್ಟು ವಾಣಿಜ್ಯ ಎಲ್‌ಪಿಜಿಯನ್ನು ವಿತರಿಸಲಾಗಿದೆ. ಎಲ್‌ಪಿಜಿ ಕಾಳಸಂತೆಯಲ್ಲಿ ಮಾರಾಟ ತಡೆಯಲು ೨ ಸಾವಿರದ ೧೦೦ ಕಡೆಗಳಲ್ಲಿ ದಾಳಿ ನಡೆಸಲಾಗಿದ್ದು, ೨೩೭ ವಿತರಕರಿಗೆ ದಂಡ ವಿಧಿಸಿ ೫೮ ವಿತರಕರನ್ನು ಅಮಾನತುಗೊಳಿಸಲಾಗಿದೆ ಎಂದು ತಿಳಿಸಿದರು. ಇದೇ ವೇಳೆ ಮಾತನಾಡಿದ ಎಂಎಸ್‌ಎಂಇ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಡಾ.ರಜನೀಶ್, ಜಾಗತಿಕ ಸವಾಲುಗಳ

ನಡುವೆ ಫೆಬ್ರವರಿ, ಮಾರ್ಚ್ ತಿಂಗಳಲ್ಲಿ ೨೦ ಲಕ್ಷಕ್ಕೂ ಹೆಚ್ಚು ಉದ್ಯಮಗಳು ಉದ್ಯಮ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡಿವೆ ಎಂದಿದ್ದಾರೆ.

<><><><>

ಜಾಗತಿಕ ಇಂಧನ ಭದ್ರತೆ ಕಳವಳಗಳ ನಡುವೆ, ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಸಮುದ್ರಯಾನದ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ಭಾರತ ಬದ್ಧವಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಪುನರುಚ್ಚರಿಸಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಅವರು, ಇಂಧನ ಮಾರುಕಟ್ಟೆಗಳಲ್ಲಿ ಪೂರೈಕೆ ಸರಪಳಿಯ ವ್ಯತ್ಯಯಗಳ ಕುರಿತು ಚರ್ಚಿಸಲು ತಾವು ಜಪಾನ್ ಆಯೋಜಿಸಿದ್ದ ಏಷ್ಯ ಶೂನ್ಯ ಹೊರಸೂಸುವಿಕೆ ಸಮುದಾಯ ಎಝೆಡ್‌ಇಸಿ ಪ್ಲಸ್ ಸಭೆಯಲ್ಲಿ ಭಾಗವಹಿಸಿರುವುದಾಗಿ ಮಾಹಿತಿ ಹಂಚಿಕೊಂಡಿದ್ದಾರೆ. ವ್ಯಾಪಾರಿ ಹಡುಗಗಳ ಮೇಲೆ ನಡೆಯುತ್ತಿರುವ ದಾಳಿಗಳು ಯಾವುದೇ ಕಾರಣಕ್ಕೂ ಸ್ವೀಕಾರಾರ್ಹವಲ್ಲ ಎಂದಿದ್ದಾರೆ. ಜಾಗತಿಕ, ಆರ್ಥಿಕ ಬೆಳವಣಿಗೆಗೆ ಇಂಧನ ಮಾರುಕಟ್ಟೆಗಳು ಅಡೆತಡೆಗಳಿಂದ ಮುಕ್ತವಾಗಿಡುವುದು ಅತ್ಯಗತ್ಯ ಎಂದಿರುವ ಸಚಿವರು ಪ್ರಮುಖ ಇಂಧನ ಬಳಕೆದಾರ ರಾಷ್ಟ್ರವಾಗಿರುವ ಭಾರತ, ಪೂರೈಕೆ ಸರಪಳಿಯನ್ನು ಬಲಪಡಿಸಲು ಸಮಾನ ಮನಸ್ಕ ಪಾಲುದಾರ ರಾಷ್ಟ್ರಗಳೊಂದಿಗೆ ನಿಕಟವಾಗಿ ಕೆಲಸ ಮಾಡಲಿದೆ ಎಂದು ತಿಳಿಸಿದ್ದಾರೆ.

<><><><>

೨೦೨೫-೨೬ರ ಆರ್ಥಿಕ ವರ್ಷದಲ್ಲಿ ಭಾರತದ ಒಟ್ಟು ರಫ್ತು ಶೇಕಡ ೪.೨೨ ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ. ವಾಣಿಜ್ಯ ಸಚಿವಾಲಯದ ಅಂಕಿಅಂಶಗಳ ಪ್ರಕಾರ, ಹಿಂದಿನ ಹಣಕಾಸು ವರ್ಷದಲ್ಲಿದ್ದ ೮೨೫.೨೬ ಶತಕೋಟಿ ಡಾಲರ್‌ಗೆ ಹೋಲಿಸಿದರೆ, ಈ ಬಾರಿ ಒಟ್ಟು ರಫ್ತು ಮೌಲ್ಯವು ೮೬೦.೦೯ ಶತಕೋಟಿ ಡಾಲರ್‌ಗಳಿಗೆ ಏರಿಕೆಯಾಗಿದೆ. ಈ ಪೈಕಿ ಸರಕುಗಳ ರಫ್ತು ೪೪೧.೭೮ ಶತಕೋಟಿ ಡಾಲರ್‌ಗಳಾಗಿದ್ದು, ಶೇಕಡಾ ೦.೯೩ ರಷ್ಟು ಏರಿಕೆ ಕಂಡಿದೆ. ಇನ್ನು ಸೇವಾ ವಲಯದ ರಫ್ತು ಅತ್ಯುತ್ತಮ ಪ್ರಗತಿ ಸಾಧಿಸಿದ್ದು, ಶೇಕಡಾ ೭.೯೪ ರಷ್ಟು ಬೆಳವಣಿಗೆಯೊಂದಿಗೆ ೪೧೮.೩೧ ಶತಕೋಟಿ ಡಾಲರ್‌ಗಳನ್ನು ತಲುಪಿದೆ. ಮಾರ್ಚ್ ತಿಂಗಳ ಅಂಕಿಅಂಶಗಳನ್ನು ಗಮನಿಸಿದರೆ, ಸರಕುಗಳ ರಫ್ತು ೩೮.೯೨ ಶತಕೋಟಿ ಡಾಲರ್ ಮತ್ತು ಸೇವೆಗಳ ರಫ್ತು ೩೫.೨೦ ಶತಕೋಟಿ ಡಾಲರ್ ಎಂದು ಅಂದಾಜಿಸಲಾಗಿದೆ. ಪೆಟ್ರೋಲಿಯಂ ಉತ್ಪನ್ನಗಳು, ಎಂಜಿನಿಯರಿಂಗ್ ಸರಕುಗಳು, ಕಲ್ಲಿದ್ದಲು ಮತ್ತು ಅದಿರುಗಳು ಈ ಅವಧಿಯಲ್ಲಿ ರಫ್ತು ಪ್ರಗತಿಗೆ ಪ್ರಮುಖ ಚಾಲಕಶಕ್ತಿಯಾಗಿ ಹೊರಹೊಮ್ಮಿವೆ. ಮುಖ್ಯವಾಗಿ ಪೆಟ್ರೋಲಿಯಂ ಉತ್ಪನ್ನಗಳ ರಫ್ತು ಶೇಕಡಾ ೫.೮೮ ರಷ್ಟು ಏರಿಕೆಯಾಗಿದೆ. ೨೦೨೬ರ ಹಣಕಾಸು ವರ್ಷದಲ್ಲಿ ಮೌಲ್ಯದ ಆಧಾರದ ಮೇಲೆ ಚೀನಾ, ಸ್ಪೇನ್, ಹಾಂಗ್ ಕಾಂಗ್, ವಿಯೆಟ್ನಾಂ ಮತ್ತು ಶ್ರೀಲಂಕಾ ದೇಶಗಳು ಭಾರತದ ರಫ್ತು ಮಾರುಕಟ್ಟೆಯಲ್ಲಿ ಅಗ್ರ ಐದು ಸ್ಥಾನಗಳನ್ನು ಪಡೆದಿವೆ ಎಂದು ವರದಿ ತಿಳಿಸಿದೆ.

<><><><>

ಭಾರತದ ಪ್ರಥಮ ಮಹಿಳಾ ರಾಷ್ಟ್ರಪತಿ ಪ್ರತಿಭಾ ಪಾಟೀಲ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದು, ಮಹಿಳಾ ಮೀಸಲಾತಿ ಉಪಕ್ರಮಕ್ಕೆ ತಮ್ಮ ಸಂಪೂರ್ಣ ಬೆಂಬಲ ಸೂಚಿಸಿದ್ದಾರೆ. ಸಂಸತ್ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರ ಪ್ರಾತಿನಿಧ್ಯ ಹೆಚ್ಚುವುದರಿಂದ ಶಾಸಕಾಂಗ ಚರ್ಚೆಗಳು ವೈವಿಧ್ಯಮಯ ದೃಷ್ಟಿಕೋನಗಳಿಂದ ಸಮೃದ್ಧಗೊಳ್ಳಲಿದ್ದು, ಹೆಚ್ಚು ಸಮತೋಲಿತ ಮತ್ತು ಸಹಾನುಭೂತಿಯುಳ್ಳ ನೀತಿಗಳ ನಿರೂಪಣೆಗೆ ದಾರಿಯಾಗಲಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಮೊದಲು ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ.

<><><><>

ಪಶ್ಚಿಮ ಬಂಗಾಳದಲ್ಲಿ ಭಾರತೀಯ ಜನತಾ ಪಕ್ಷದ ಸರ್ಕಾರ ಅಧಿಕಾರಕ್ಕೆ ಬಂದರೆ ಗೋರ್ಖಾಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದ್ದಾರೆ. ಡಾರ್ಜಿಲಿಂಗ್‌ನ ಲೆಬಾಂಗ್‌ನಲ್ಲಿರುವ ಗೋರ್ಖಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾಲ್ಡಾದಿಂದ ವರ್ಚುವಲ್ ಮೂಲಕ ಅವರು ಮಾತನಾಡಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>